2 No are there.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Green Infra Wind Power Generation Limited ಕಂಪನಿಗೆ ಬಳ್ಳಾರಿ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ 84 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ:
1 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KRED/08/GIWPGL-84MW/2016/1302-G.

3158 18/11/16

2 ದಿನಾಂಕ: 27.02.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: KRED/08/GIWPGL-84MW/2016/1939 ದಿನಾಂಕ :28.05.2016.

* * *

**ಪ್ರಸ್ತಾವನೆ :-**

M/s Green Infra Wind Power Generation Limited ಕಂಪನಿಯವರು ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ಮತ್ತು ಹೂವಿನಹಡಗಲಿ ತಾಲ್ಲೂಕಿನ ದಾಸರಹಳ್ಳಿ, ಕೋಹಿಲಗಟ್ಟಿ, ವೀರಾಪುರಂ, ಉತ್ತಂಗಿ, ಭಾವಿಹಳ್ಳಿ, ಹೊಲಗುಂಡಿ, ಹನುಮನಗೊಂಡನಹಳ್ಳಿ, ಯಲಮಾರನಹಳ್ಳಿ ಮತ್ತು ಗಿರೇಗೊಂಡನಹಳ್ಳಿ ಗ್ರಾಮಗಳಲ್ಲಿ 84 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಇದನ್ನು ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ಏಕ ಕಡತ ಪದ್ಧತಿಯಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ :27.02.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಸಮಿತಿಯು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, M/s Green Infra Wind Power Generation Limited ಕಂಪನಿಯು ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ಮತ್ತು ಹೂವಿನಹಡಗಲಿ ತಾಲ್ಲೂಕಿನ ದಾಸರಹಳ್ಳಿ, ಕೋಹಿಲಗಟ್ಟಿ, ವೀರಾಪುರಂ, ಉತ್ತಂಗಿ, ಭಾವಿಹಳ್ಳಿ, ಹೊಲಗುಂಡಿ, ಹನುಮನಗೊಂಡನಹಳ್ಳಿ, ಯಲಮಾರನಹಳ್ಳಿ ಮತ್ತು ಗಿರೇಗೊಂಡನಹಳ್ಳಿ ಗ್ರಾಮಗಳಲ್ಲಿ ಸ್ಥಾಪಿಸಲು ಉದ್ದೇಶಿಸಿರುವ 84 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಸಂಬಂಧಿಸಿದಂತೆ ಅಭಿವೃದ್ಧಿದಾರರು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕೆ.ಆರ್.ಇ.ಡಿ.ಎಲ್. ಸಂಸ್ಥೆಗೆ ಸಲ್ಲಿಸಿರುವುದರಿಂದ, ಸದರಿ ಕಂಪನಿಗೆ 84 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

Wind Section
Ward No. 1216
Date:........................

AFA
19/11/16

CM (Tech) 19/11/16

ಈ ಮಧ್ಯೆ, ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಪತ್ರದಲ್ಲಿ ಅಭಿವೃದ್ಧಿದಾರರು ಕ್ರೆಡಲ್‌ಗೆ ಮನವಿ ಸಲ್ಲಿಸಿ, ದಿನಾಂಕ :27.02.2016 ರಂದು ನಡೆದ ಹಂಚಿಕೆ ಸಮಿತಿಯಲ್ಲಿ M/s Green Infra Wind Power Generation Limited ಕಂಪನಿಗೆ ಬಳ್ಳಾರಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಹಂಚಿಕೆ ಆದೇಶ ನೀಡಲು ಶಿಫಾರಸ್ಸುಗೊಂಡಿರುವ 84 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ 44 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Green Infra Wind Power Generation Limited ಕಂಪನಿಯ ಹೆಸರಿನಲ್ಲಿ ಮತ್ತು ಉಳಿದ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಇದೇ ಕಂಪನಿಯ ಸಹೋದರ ಕಂಪನಿಯಾದ M/s Green Infra Wind Energy Limited ಕಂಪನಿಯ ಹೆಸರಿನಲ್ಲಿ ನೀಡುವಂತೆ ಕೋರಿರುತ್ತಾರೆ. ಈ ಹಿನ್ನೆಲೆಯಲ್ಲಿ, M/s Green Infra Wind Power Generation Limited ಕಂಪನಿಗೆ ಬಳ್ಳಾರಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಹಂಚಿಕೆ ಆದೇಶ ನೀಡಲು ಶಿಫಾರಸ್ಸುಗೊಂಡಿರುವ 84 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ 44 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Green Infra Wind Power Generation Limited ಕಂಪನಿಯ ಹೆಸರಿನಲ್ಲಿ ಮತ್ತು ಉಳಿದ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Green Infra Wind Energy Limited ಕಂಪನಿಯ ಹೆಸರಿನಲ್ಲಿ ಈಗಾಗಲೇ ಪಾವತಿಸಲಾಗಿರುವ ಅರ್ಜಿ ಶುಲ್ಕ ಮತ್ತು ಡಿಪಿಆರ್ ಶುಲ್ಕವನ್ನು ಹೊಂದಾಣಿಕೆ ಮಾಡಿಕೊಳ್ಳುವ ಹಾಗೂ ಹೆಚ್ಚುವರಿಯಾದಲ್ಲಿ ಪಾವತಿಸುವ ಷರತ್ತಿಗೊಳಪಟ್ಟು ಹಂಚಿಕೆ ಮಾಡುವಂತೆ ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 226 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ : 09.11.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು, ಬಳ್ಳಾರಿ ಜಿಲ್ಲೆಯ ಹಗರಿಬೊಮ್ಮನಹಳ್ಳಿ ಮತ್ತು ಹೂವಿನಹಡಗಲಿ ತಾಲ್ಲೂಕಿನ ದಾಸರಹಳ್ಳಿ, ಕೋಹಿಲಗಟ್ಟಿ, ವೀರಾಪುರಂ, ಉತ್ತಂಗಿ, ಭಾವಿಹಳ್ಳಿ, ಹೊಲಗುಂಡಿ, ಹನುಮನಗೊಂಡನಹಳ್ಳಿ, ಯಲಮಾರನಹಳ್ಳಿ ಮತ್ತು ಗಿರೇಗೊಂಡನಹಳ್ಳಿ ಗ್ರಾಮಗಳಲ್ಲಿ M/s Green Infra Wind Power Generation Limited ಕಂಪನಿಗೆ ಹಂಚಿಕೆ ಮಾಡಲು ಉದ್ದೇಶಿಸಿರುವ 84 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ M/s Green Infra Wind Power Generation Limited ಕಂಪನಿಗೆ 44 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮತ್ತು M/s Green Infra Wind Energy Limited ಕಂಪನಿಗೆ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

## Schedule

Geographical area description for 84 MW capacity wind power project

| Proposed capacity in MW | Near by villages of the proposed area and Taluk district. | Geographical area description of the project |
|---|---|---|
| 84 MW (42 Nos x 2000 kW) | Dasarahalli, Kohilagatti, Virpuram, Uttangi, Bavihalli, Holagundi, Hanumanagondnahalli, Yalmaranhalli and Giregondanahalli, Hagaribommanahalli & Huvinahadagalli Taluk, Bellary District. | The proposed areas is comprising, non-complex type and plateaus. The portion of the area appears to be non-cultivable and described as rock outcrops with boulders. The other portion of the area has presence of streams and plateaus. Further, the area is spread in 3 toposheets. The area has varied elevations and is held in the following Geographical co-ordinates as:<br>**Area A:48M16**<br>**Point A**:Lat:15°0'0"N, Long: 75°58'8.69"E<br>**Point B**:Lat:15°2'6.21"N, Long: 75°58.8'69"E<br>**Point C**:Lat:15°2'6.21"N, Long: 75°55'33.69"E<br>**Point D**:Lat:15°4'22.27"N, Long:75°55'35.38"E<br>**Point E**:Lat:15°4'28.82"N, Long: 76°0'0"E<br>**Point F**:Lat:15°0'0"N, Long: 76°0'0"E<br>**Peaks**: 559, 619, 660, 543 and 576 m AMSL.<br>**Area B:57 A/4**<br>**Point A**:Lat:15°0'0"N, Long: 76°0'0"E<br>**Point B**:Lat:15°4'20.18"N, Long: 76°0'0"E<br>**Point C**:Lat:15°4'20.18"N, Long: 76°5'0"E<br>**Point D**:Lat:15°0'0"N, Long:76°5'0"E<br>**Peaks**: 551, 555, 544, 564, 566, 526 & 533 m AMSL.<br>**Area C:57 B/1**<br>**Point A**:Lat:14°56'44.40"N, Long: 76°0'0"E<br>**Point B**:Lat:15°0'0"N, Long: 76°0'0"E<br>**Point C**:Lat:15°0'0"N, Long: 76°6'12.44"E<br>**Point D**:Lat:14°58'52"N, Long:76°6'12.44"E<br>**Point E**:Lat:14°57'57.32"N, Long: 76°5'0"E<br>**Point F**:Lat:14°56'46.06"N, Long: 76°1'9.07"E<br>**Peaks**: 595, 578, 653 and 664 m AMSL. |
| 84MW | | |

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ:19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

---4)

4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆಯುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಮತ್ತು ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಕೂಡ ಅನುಮತಿಸಲಾಗಿದೆ.

7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.

10. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

09.11

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.

2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001

3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.

4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

5 ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

6 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ,ಬೆಂಗಳೂರು–9.

8 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು–1.

9 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಕಲಬುರಗಿ.

10 ಜಿಲ್ಲಾಧಿಕಾರಿ, ಬಳ್ಳಾರಿ ಜಿಲ್ಲೆ, ಬಳ್ಳಾರಿ ಜಿಲ್ಲೆ.

11 ಉಪ ಅರಣ್ಯ ಸಂರಕ್ಷಣಾಧಿಕಾರಿ, ಬಳ್ಳಾರಿ ಪ್ರಾದೇಶಿಕ ವಿಭಾಗ, ಬಳ್ಳಾರಿ.

12 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

13 M/s Green Infra Wind Power Generation Limited., No.33, 2nd Floor, "Swayam Prabhe" American Colony, north park Road, Kumara Park East, Bangalore-560 001.

14 M/s Green Infra Wind Energy Limited., No.33, 2nd Floor, "Swayam Prabhe" American Colony, north park Road, Kumara Park East, Bangalore-560 001.

15 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

16 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

17 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.